ಆ) ಈ ಬಗ್ಗೆ ನಿರ್ದಿಷ್ಟವಾದ ಯಾವ ಸೂಚನೆಯೂ ಇರಲಿಲ್ಲವಾದ್ದರಿಂದ ತೆಗೆದುಕೊಂಡ ನಿಲುವಿನ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಈ ಬಗ್ಗೆ ರಾಜ್ಯ ಸರ್ಕಾರದ ಅಭಿಪ್ರಾಯವನ್ನು ಕೇಳಿ ಕೇಂದ್ರದಿಂದ ಯಾವ ಮಾಹಿತಿಯೂ ಬಂದಿಲ್ಲವಾದ್ದರಿಂದ ರಾಜ್ಯ ಸರ್ಕಾರದ ಅಭಿಪ್ರಾಯವನ್ನು ಕೊಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ವರದಿಗಳನ್ನೊಪ್ಪಿಸುವುದು

ಶ್ರೀ ಲಕ್ಷ್ಮೀನರಸಿಂಹಯ್ಯ (ಉಪಾಧ್ಯಕ್ಷರು).—ಮಾನ್ಯ ಅಧ್ಯಕ್ಷರೇ, ಆರ್ಜಿಗಳ ಸಮಿತಿಯ ಮೂರನೇ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಆರ್ಜಿಗಳ ಸಮಿತಿಯ ಮೂರನೇ ವರದಿಯನ್ನು ಸಭೆಯ ಮುಂದೆ ಮಂಡಿಸಲಾಯಿತು.

ಶ್ರೀ ಲಕ್ಷ್ಮೀನರಸಿಂಹಯ್ಯ (ಉಪಾಧ್ಯಕ್ಷರು).—ಖಾಸಗಿ ಸದಸ್ಯರ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಒಂದನೇ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತೇನೆ.

SRI B. NARAYANASWAMY.—I know that the House agrees with the report.

ಅಧ್ಯಕ್ಷರು.—ಖಾಸಗಿ ಸದಸ್ಯರ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಒಂದನೇ ವರದಿಯನ್ನು ಸಭೆಗೆ ಒಪ್ಪಿಸಲಾಯಿತು.

ಶ್ರೀ ಎಂ. ವೀರಪ್ಪಮೊಯ್ಲಿ.—ಮಾನ್ಯ ಅಧ್ಯಕ್ಷರೇ, ಈ ಕೆಳಕಂಡ ವರದಿಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅ) ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಮತ್ತು ಸಹಕಾರ ಇಲಾಖೆಗಳಿಗೆ ಸಂಬಂಧಿಸಿದಂತೆ, ಒಪ್ಪಿದ ವಿಧಾನ ಸಭೆಯ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ಒಪ್ಪಿದ ಹಾಗೂ ೧೫ನೇ ವರದಿಗಳಲ್ಲಿ ಮಾಡಲಾದ ಶಿಫಾರಸ್ಸುಗಳ ಮೇಲೆ ಸರ್ಕಾರದವರು ತೆಗೆದುಕೊಂಡ ಕ್ರಮಗಳ ಮೇಲೆ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ೧೫ನೇ ವರದಿ.

ಆ) ಪಶುಸಂಗೋಪನೆ ಇಲಾಖೆಗೆ ಸಂಬಂಧಿಸಿದಂತೆ ೧೯೭೮-೭೯ನೇ ಸಾಲಿನಿಂದ ೧೯೮೩-೮೪ನೇ ಸಾಲಿನವರೆಗಿನ ಹಣ ವಿನಿಯೋಗ ಮತ್ತು ವಿತ್ತೀಯ ಲೆಕ್ಕ ಪತ್ರಗಳ ಮೇಲಿನ ಸದರಿ ಸಾಲುಗಳ ಬಗ್ಗೆ ಭಾರತದ ನಿಯಂತ್ರಕ ಮಹಾಲೇಖ ಪರೀಕ್ಷಕರ (ಸಿವಿಲ್) ವರದಿಯ ಮೇಲಿನ ಸಾರ್ವಜನಿಕ ಲೆಕ್ಕ ಪತ್ರಗಳ ಸಮಿತಿಯ ೧೬ನೇ ವರದಿಯನ್ನು, ಹಾಗೂ

ಇ) ಆಹಾರ ಇಲಾಖೆಗೆ ಸಂಬಂಧಿಸಿದಂತೆ ಒಪ್ಪಿದ ವಿಧಾನ ಸಭೆಯ ಸಾರ್ವಜನಿಕ ಲೆಕ್ಕಪತ್ರ ಸಮಿತಿಯ ೧೧ನೇ ವರದಿಯಲ್ಲಿ ಮಾಡಲಾಗಿದ್ದ ಶಿಫಾರಸ್ಸುಗಳ ಮೇಲೆ ಸರ್ಕಾರದವರು ತೆಗೆದುಕೊಂಡ ಕ್ರಮಗಳ ಮೇಲೆ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ ೧೭ನೇ ವರದಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು.—ಮೇಲ್ಕಂಡ ವರದಿಗಳನ್ನು ಸಭೆಯ ಮುಂದೆ ಮಂಡಿಸಲಾಗಿದೆ.

ನಿಲುವಳಿ ಸೂಚನೆ ಮಂಡನೆಗೆ ಅನುಮತಿ ಕೋರಿಕೆ

ಯೆಡ್ಡೂರ್ ತಾಲ್ಲೂಕಿನ, ಗುರುಮಿಟ್‌ಕಲ್ ಮುನಿಸಿಪಾಲಿಟಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರನ್ನು ಪೋಲೀಸರು ದಸ್ತಗಿರಿ ಮಾಡಿ ಮೆರವಣಿಗೆ ಮಾಡಿಸಿರುವುದರ ಬಗ್ಗೆ

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗುರುಮಿಠಕಲ್).—ಮಾನ್ಯ ಅಧ್ಯಕ್ಷರೇ, ಈಗಾಗಲೇ ನಾವು ಒಂದು ನಿಲುವಳಿ ಸೂಚನೆಯನ್ನು ಕೊಟ್ಟಿದ್ದೇವೆ. ಗುರುಮಿಠಕಲ್‌ನಲ್ಲಿ ೧೫ನೇ ತಾರೀಖು ಒಂದು